**All India Radio: Bangalore**
**Regional Bulletin In Kannada**
**16.04.2026 / 6.40 p.m.**
**ಆಕಾಶವಾಣಿ ಬೆಂಗಳೂರು**

**ಪ್ರದೇಶ ಸಮಾಚಾರ**

ಮುಖ್ಯಾಂಶಗಳು

1. ಕುಡಿಯುವ ನೀರಿಗೆ ತೊಂದರೆಯಾಗದಂತೆ ಮುಂಜಾಗ್ರತಾ ಕ್ರಮ ಕೈಗೊಳ್ಳಲು ಎಲ್ಲಾ ಜಿಲ್ಲಾಧಿಕಾರಿಗಳಿಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ಸೂಚನೆ
2. ಮಹಿಳಾ ಮೀಸಲಾತಿ ಮಸೂದೆಗೆ ಕಾಂಗ್ರೆಸ್ ಬೆಂಬಲಿಸುವ ವಿಶ್ವಾಸ - ಛಲವಾದಿ ನಾರಾಯಣಸ್ವಾಮಿ
3. ಕಲಬುರಗಿ ಜಿಲ್ಲೆಯಲ್ಲಿ ೨ ಸಾವಿರದ ೮೭೭ ಎಕರೆ ಅರಣ್ಯವನ್ನು ಸಂರಕ್ಷಿತ ಮೀಸಲು ಪ್ರದೇಶವೆಂದು ಘೋಷಿಸಿದ ಸಚಿವ ಈಶ್ವರ ಖಂಡ್ರೆ
4. ರಾಜ್ಯ ಬಿಜೆಪಿ ನಾಯಕನ ಕೊಲೆ ಪ್ರಕರಣ: ಶಾಸಕ ವಿನಯ್ ಕುಲಕರ್ಣಿ ಶಿಕ್ಷೆ ಪ್ರಮಾಣ ನಾಳೆ

<><><><>

ರಾಜ್ಯದ ಐದು ಜಿಲ್ಲೆಗಳನ್ನು ಹೊರತುಪಡಿಸಿ ಬೇರೆ ಎಲ್ಲಾ ಜಿಲ್ಲೆಗಳಲ್ಲಿ ಮುಂಗಾರು ಕೊರತೆ ನಿರೀಕ್ಷಿಸಲಾಗಿದ್ದು, ಕುಡಿಯುವ ನೀರಿಗೆ ತೊಂದರೆಯಾಗದಂತೆ ಮುಂಜಾಗ್ರತಾ ಕ್ರಮಗಳನ್ನು ಕೈಗೊಳ್ಳಲು ಜಿಲ್ಲಾಧಿಕಾರಿಗಳಿಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ಸೂಚಿಸಿದ್ದಾರೆ. ವಿಧಾನಸೌಧ ಸಭಾಂಗಣದಲ್ಲಿಂದು ನಡೆದ ಗ್ರಾಮೀಣ ಹಾಗೂ ಪಟ್ಟಣ ಪ್ರದೇಶಗಳಲ್ಲಿನ ಕುಡಿಯುವ ನೀರು ಪೂರೈಕೆ ಕುರಿತಾಗಿ ಜಿಲ್ಲಾ ಉಸ್ತುವಾರಿ ಸಚಿವರು, ಜಿಲ್ಲಾಧಿಕಾರಿಗಳು, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳ ಸಭೆ ನಡೆಯಿತು. ಇದೇ ಸಂದರ್ಭದಲ್ಲಿ ಮಾತನಾಡಿದ ಅವರು, ಈ ವರ್ಷ ಮುಂಗಾರಿನಲ್ಲಿ ವಾಡಿಕೆಗಿಂತ ಕಡಿಮೆ ಮಳೆಯಾಗುವ ಸಾಧ್ಯತೆಯಿದೆ ಎಂದು ಕೇಂದ್ರ ಹವಾಮಾನ ಇಲಾಖೆ ಮುನ್ಸೂಚನೆ ನೀಡಿದೆ. ಆಗಸ್ಟ್ ತಿಂಗಳಲ್ಲಿ ವಾಡಿಕೆ ಮಳೆಯಾಗುವ ಸಾಧ್ಯತೆಯಿದ್ದು, ಸೆಪ್ಟಂಬರ್ ತಿಂಗಳಲ್ಲಿ ಮಳೆ ಕಡಿಮೆ ನಿರೀಕ್ಷಿಸಲಾಗಿದೆ ಎಂದರು. ಕುಡಿಯುವ ನೀರಿಗೆ ತೊಂದರೆಯಾದರೆ ಆಯಾ ಜಿಲ್ಲಾಧಿಕಾರಿಗಳು, ಕಂದಾಯ ಇಲಾಖೆ, ಪಂಚಾಯತ್ ರಾಜ್ ಇಲಾಖೆ ಹಾಗೂ ನಗರಾಭಿವೃದ್ಧಿ ಇಲಾಖೆಗಳು ಪರಸ್ಪರ ಸಮನ್ವಯದೊಂದಿಗೆ ಕಾರ್ಯ ನಿರ್ವಹಿಸಬೇಕು ಎಂದು ಸೂಚಿಸಿದರು. ಈ ಬಾರಿ ಏಪ್ರಿಲ್-ಜೂನ್ ಅವಧಿಯಲ್ಲಿ ಉತ್ತರ ಒಳನಾಡಿನ ಬಹುತೇಕ ಜಿಲ್ಲೆಗಳಲ್ಲಿ ವಾಡಿಕೆಗಿಂತ ಹೆಚ್ಚು ಬಿಸಿಗಾಳಿ ದಿನಗಳು ಕಂಡುಬರುವ ಸಾಧ್ಯತೆಯಿದೆ. ಇಂತಹ ಸಂದರ್ಭದಲ್ಲಿ ಯಾವ ರೀತಿಯ ಮುಂಜಾಗರೂಕತಾ ಕ್ರಮಗಳನ್ನು ಕೈಗೊಳ್ಳಬೇಕು. ಹವಾಮಾನ ಇಲಾಖೆಯ ಮುನ್ಸೂಚನೆಗಳನ್ನು ಮುಂಜಾಗ್ರತಾ ಗಂಭೀರವಾಗಿ ಪರಿಗಣಿಸಬೇಕು ಎಂಬ ಬಗ್ಗೆ ಎಲ್ಲಾ ಜಿಲ್ಲಾಧಿಕಾರಿಗಳು ಸೂಚನೆಗಳನ್ನು ನೀಡಬೇಕು ಎಂದು ತಿಳಿಸಿದರು.

<><><><>

ಮಹಿಳಾ ಮೀಸಲಾತಿ ಮಸೂದೆಗಾಗಿ ಸಂಸತ್ತಿನ ವಿಶೇಷ ಅಧಿವೇಶನ ನಡೆಯುತ್ತಿದ್ದು, ಮಹಿಳೆಯರಿಗೂ ಕಾನೂನು ರಚನೆಗೆ ಸಮಾನ ಅವಕಾಶ ಸಿಗಲಿದೆ. ಇದಕ್ಕೆ ವಿರೋಧಪಕ್ಷ ಕಾಂಗ್ರೆಸ್ ಬೆಂಬಲ ನೀಡಲಿದೆ ಎಂಬ ವಿಶ್ವಾಸವಿದೆ ಎಂದು ವಿಧಾನ ಪರಿಷತ್ ವಿಪಕ್ಷ ನಾಯಕ ಛಲವಾದಿ ನಾರಾಯಣಸ್ವಾಮಿ ಹೇಳಿದ್ದಾರೆ. ಬೆಂಗಳೂರಿನಲ್ಲಿಂದು ಮಾತನಾಡಿದ ಅವರು, ಬಾಬಾ ಸಾಹೇಬ್ ಡಾ.ಅಂಬೇಡ್ಕರ್ ಅವರು ದೇಶದಲ್ಲಿ ಸರ್ವರಿಗೂ ಸಮಾನ ಹಕ್ಕು ಇರಬೇಕು, ಸಮಾನ ಅವಕಾಶ ಸಿಗಬೇಕು ಎಂದು ಬಯಸಿದ್ದರು. ಇದೀಗ ಪ್ರಧಾನಿ ನರೇಂದ್ರ ಮೋದಿ ಅವರು ಬಾಬಾ ಸಾಹೇಬರ ಚಿಂತನೆಗೆ ಶಕ್ತಿ ಕೊಟ್ಟಿದ್ದಾರೆ ಎಂದರು. ಈ ಹಿಂದೆ ಮಹಿಳೆಯರಿಗೆ ಅವಕಾಶ, ಅಧಿಕಾರ ಮತ್ತು ಸಮಾನ ಹಕ್ಕು ಕೊಡುವಲ್ಲಿ ಬಾಯಿ ಮಾತಿನ ಭಾಷಣ ಇತ್ತೇ ಹೊರತು ಹೃದಯವಂತಿಕೆ ಇರಲಿಲ್ಲ. ಆದರೆ ಇಂದು ನಾರಿ ಶಕ್ತಿ ಹೆಸರಿನಲ್ಲಿ ಪ್ರಧಾನಿಯವರು ಸಂಸತ್ತಿನ ವಿಶೇಷ ಅಧಿವೇಶನ ಕರೆದು ಮಸೂದೆ ಮಂಡಿಸುತ್ತಿದ್ದಾರೆ ಎಂದರು. ಇನ್ನು ಮುಂದೆ ಹೆಣ್ಣು ಮಕ್ಕಳಿಗೆ ಎಲ್ಲ ರೀತಿಯ ಅವಕಾಶಗಳ ದೊರೆಯಲಿವೆ. ಹಿಂದೂ ಕೋಡ್ ಬಿಲ್ ತರುವ ಮೊದಲು ಹೆಣ್ಣು ಮಕ್ಕಳಿಗೆ

ಮತದಾನದ ಅವಕಾಶವೂ ಇರಲಿಲ್ಲ. ಬಾಬಾ ಸಾಹೇಬರು ಅವರ ಶಕ್ತಿ, ಯೋಚನೆ ಹಾಗೂ ಚಿಂತನೆಯಿಂದ ಹೆಣ್ಣು ಮಕ್ಕಳಿಗೆ ಮತದಾನದ ಅವಕಾಶ ಸಿಕ್ಕಿತು. ನಾರೀಶಕ್ತಿ ಮಸೂದೆ ಮೂಲಕ ಕಾನೂನು ರಚನೆಯಲ್ಲೂ ಮಹಿಳೆಯರಿಗೆ ಸಮಾನ ಅವಕಾಶ ಸಿಗಲಿದೆ ಎಂದು ಹೇಳಿದರು.

<><><><>

ಕಲ್ಬುರ್ಗಿ ಜಿಲ್ಲೆ, ಚಿತ್ತಾಪೂರ ತಾಲೂಕಿನ ಅಲ್ಲೂರು ಗ್ರಾಮದ ೨ ಸಾವಿರದ ೮೭೭ ಎಕರೆ ಅರಣ್ಯವನ್ನು ಸಂರಕ್ಷಿತ ಮೀಸಲು ಎಂದು ಘೋಷಿಸಲು ಅರಣ್ಯ ಸಚಿವ ಈಶ್ವರ ಖಂಡ್ರೆ ನೇತೃತ್ವದಲ್ಲಿ ನಡೆದ ಕರ್ನಾಟಕ ವನ್ಯಜೀವಿ ಮಂಡಳಿಯ ೬ನೇ ಸಭೆಯಲ್ಲಿಂದು ನಿರ್ಧರಿಸಲಾಗಿದೆ. ಬೆಟ್ಟ ಗುಡ್ಡಗಳಿಂದ ಕೂಡಿದ, ಹಚ್ಚಹಸಿರಿನ ರಮಣೀಯವಾದ ಈ ಅರಣ್ಯ ಪ್ರದೇಶವು ವನ್ಯಜೀವಿಗಳ ಆವಾಸಸ್ಥಾನವಾಗಿದ್ದು, ಈ ಪ್ರದೇಶವನ್ನು ಸಂರಕ್ಷಿತ ಮೀಸಲು ಎಂದು ಘೋಷಿಸಲು ಯೋಗ್ಯವಾಗಿದೆ ಎಂದು ಸಭೆಯಲ್ಲಿ ತೀರ್ಮಾನಿಸಲಾಯಿತು. ಇದಕ್ಕೂ ಮುನ್ನ ವನ್ಯಜೀವಿ ಸಂರಕ್ಷಣಾ ಕಾಯಿದೆ ೧೯೭೨ರ ಕಲಂ ೩೬ ಎ ರೀತ್ಯ  ಸ್ಥಳೀಯ ಗ್ರಾಮಪಂಚಾಯ್ತಿಯ ವಿಶೇಷ ಗ್ರಾಮಸಭೆಯಲ್ಲಿಯೂ ಈ ಬಗ್ಗೆ ಚರ್ಚಿಸಿ, ಸಂರಕ್ಷಿತ ಮೀಸಲು ಎಂದು ಘೋಷಿಸಲು ಸಮ್ಮತಿ ಪಡೆಯಲಾಗಿದೆ ಎಂದು ಸಭೆಗೆ ತಿಳಿಸಲಾಯಿತು. ಉಳಿದಂತೆ ಬನ್ನೇರುಘಟ್ಟ ರಾಷ್ಟ್ರೀಯ ಉದ್ಯಾನ ಪರಿಸರ ಸೂಕ್ಷ್ಮ ವಲಯದಲ್ಲಿ ಇಂಡಿಯನ್ ಇನ್‌ಸ್ಟಿಟ್ಯೂಟ್ ಆಫ್ ಮ್ಯಾನೇಜ್ಮೆಂಟ್ ವತಿಯಿಂದ ಹಂತ-೧ ಪದವಿ ಕಾಲೇಜು ಆವರಣ ನಿರ್ಮಾಣ  ಸೇರಿದಂತೆ ವಿವಿಧ ಯೋಜನೆಗಳಿಗೆ ಅನುಮೋದನೆ ನೀಡಲಾಯಿತು.

<><><><>

ಬೆಂಗಳೂರಿನ ಶಾಸಕರು/ಸಂಸದರ ವಿಶೇಷ ನ್ಯಾಯಾಲಯವು ಇಂದು ಬಿಜೆಪಿ ನಾಯಕ ಯೋಗೇಶ್ ಗೌಡ ಕೊಲೆ ಪ್ರಕರಣದಲ್ಲಿ ಅಪರಾಧಿ ಶಾಸಕ ವಿನಯ್ ಕುಲಕರ್ಣಿ ಅವರ ಶಿಕ್ಷೆಯ ಪ್ರಮಾಣ ಕುರಿತ ತೀರ್ಪನ್ನು ನಾಳೆಗೆ ಕಾಯ್ದಿರಿಸಿದೆ. ನ್ಯಾಯಾಲಯವು ಅಂತಿಮ ಹೇಳಿಕೆಗಳನ್ನು ದಾಖಲಿಸುವ ಪ್ರಕ್ರಿಯೆಯನ್ನು ಪೂರ್ಣಗೊಳಿಸಿದ್ದು, ಕೇಂದ್ರ ತನಿಖಾ ದಳ ಮತ್ತು ಶಿಕ್ಷೆಗೊಳಗಾದ ಕಾಂಗ್ರೆಸ್ ಶಾಸಕ ವಿನಯ್ ಕುಲಕರ್ಣಿ ಅವರ ವಕೀಲರ ಅಂತಿಮ ಪ್ರತಿವಾದಗಳು ಪೂರ್ಣಗೊಂಡವು. ನಂತರ ನ್ಯಾಯಾಧೀಶ ಸಂತೋಷ್ ಗಜಾನನ ಭಟ್ ಅವರು ಶಾಸಕ ಮತ್ತು ಇತರ ೧೬ ಜನರ ವಿರುದ್ಧದ ತೀರ್ಪು ಘೋಷಣೆಗಾಗಿ ಪ್ರಕರಣವನ್ನು ಮುಂದೂಡಿದರು.          ದೀರ್ಘ ವಿಚಾರಣೆಯ ನಂತರ ನ್ಯಾಯಾಲಯವು ಅಂತಿಮ ತೀರ್ಪು ನೀಡಿತು. ಪ್ರಕರಣದಲ್ಲಿ ವಿನಯ್ ಕುಲಕರ್ಣಿ ಅವರನ್ನು ೧೫ನೇ ಆರೋಪಿ ಎಂದು ಹೆಸರಿಸಲಾಗಿದೆ. ಅವರು ಪ್ರಸ್ತುತ ಕರ್ನಾಟಕ ನಗರ ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿಯ ಅಧ್ಯಕ್ಷರಾಗಿ ಸೇವೆ ಸಲ್ಲಿಸುತ್ತಿದ್ದಾರೆ. ನ್ಯಾಯಾಲಯವು ಅವರನ್ನು ಕ್ರಿಮಿನಲ್ ಪಿತೂರಿಯ ಆರೋಪದಲ್ಲಿ ತಪ್ಪಿತಸ್ಥರೆಂದು ಪರಿಗಣಿಸಿದೆ.

<><><><>

ಕೇಂದ್ರ ಸರ್ಕಾರ ಶಾಸನ ಸಭೆಗಳಲ್ಲಿ ಮಹಿಳೆಯರಿಗೆ ಶೇಕಡ ೩೩ ರಷ್ಟು ಮೀಸಲಾತಿ ಒದಗಿಸುವ ಆಶಯದಿಂದ 'ನಾರಿ ಶಕ್ತಿ ವಂದನಾ ಕಾಯ್ದೆ'ಯನ್ನು ಜಾರಿಗೊಳಿಸಿದೆ.  ಈ ಹಿನ್ನೆಲೆಯಲ್ಲಿ ಆಕಾಶವಾಣಿಯೊಂದಿಗೆ ಮಾತನಾಡಿದ ವಕೀಲರಾದ ವಿಭಾ ವರ್ಗೀಸ್ ಕೇಂದ್ರ ಸರ್ಕಾರ ಜಾರಿ ತರಲಿರುವ 'ನಾರಿ ಶಕ್ತಿ ವಂದನಾ ಕಾಯ್ದೆ'ಯು ಮಹಿಳೆಯರನ್ನು ರಾಜಕೀಯವಾಗಿ ಮುನ್ನೆಲೆಗೆ ತರಲು ಹಾಗೂ ನಿರ್ಧಾರ ಕೈಗೊಳ್ಳುವ ಹಂತದಲ್ಲಿ ಅವರ ಭಾಗವಹಿಸುವಿಕೆ ಹೆಚ್ಚಿಸಲು ಅತ್ಯಂತ ಸಹಕಾರಿಯಾಗಿದೆ ಎಂದು ಹೆಳಿದರು. 'ನಾರಿ ಶಕ್ತಿ ವಂದನಾ ಕಾಯ್ದೆ'ಯು ಮಹಿಳೆಯರನ್ನು ರಾಜಕೀಯವಾಗಿ ಮತ್ತು ಆಡಳಿತಾತ್ಮಕವಾಗಿ ಮುನ್ನಲೆಯಲ್ಲಿ ತರಲು ಈ ಕಾಯ್ದೆ ಸಹಕಾರಿಯಾಗಿದೆ ಎಂದು ಹೇಳಿದರು.

ಧ್ವನಿ: ವಿಭಾ ವರ್ಗೀಸ್ (೩೦ ಸೆಕೆಂಡ್‌ಗಳು)

<><><><>

ಪ್ರಧಾನಮಂತ್ರಿ ನರೇಂದ್ರಮೋದಿ ನೇತೃತ್ವದ ಕೇಂದ್ರ ಸರ್ಕಾರವು ಜಾರಿ ಮಾಡಿರುವ ನಾರಿ ಶಕ್ತಿ ವಂದನಾ ಅಧಿನಿಯಮ ಲೋಕಸಭೆ ಮತ್ತು ರಾಜ್ಯ ವಿಧಾನಸಭೆಗಳಲ್ಲಿ ಮಹಿಳೆಯರಿಗೆ ಶೇಕಡ ೩೩ ಸ್ಥಾನಗಳನ್ನು ಮೀಸಲಿಡುವ ಐತಿಹಾಸಿಕ ಕಾನೂನು ಆಗಿದ್ದು. ಮಹಿಳೆಯರು ಅಭಿವೃದ್ಧಿ ಹೊಂದಲಿದ್ದಾರೆ ಎಂದು ಬಿಜೆಪಿ ಮುಖಂಡರಾದ ಡಾ.ಪುಣ್ಯವತಿ ಸಿ.ನಾಗರಾಜ್ ಹೇಳಿದ್ದಾರೆ. ಚಾಮರಾಜನಗರದಲ್ಲಿ ಸುದ್ದಿಗಾರರೊಂದಿಗೆ

ಮಾತನಾಡಿದ ಅವರು, ಈ ಕಾಯ್ದೆಯು ರಾಜಕೀಯದಲ್ಲಿ ಮಹಿಳೆಯರ ಪ್ರಾತಿನಿಧ್ಯವನ್ನು ಹೆಚ್ಚ ಮಾಡಲಿದ್ದು, ಶಾಸನ ಸಭೆಗಳಲ್ಲಿ ಶೇಕಡ ೩೩ ರಷ್ಟು ಮೀಸಲಾತಿ ಕಲ್ಪಿಸುವ ಈ ಕಾಯ್ದೆ ಜಾರಿಯಿಂದ ಮಹಿಳೆಯರ ಸಬಲೀಕರಣವಾಗಲಿದೆ. ಅಲ್ಲದೇ ಆಡಳಿತದಲ್ಲಿ ಮಹಿಳೆಯರ ಪ್ರಾತಿನಿಧ್ಯ ಹೆಚ್ಚಾಗಲಿದೆ ಎಂದರು. ಪ್ರಸ್ತುತ ಮಹಿಳೆಯರು ಎಲ್ಲ ಕ್ಷೇತ್ರಗಳಲ್ಲೂ ತೊಡಗಿಸಿಕೊಂಡಿದ್ದು  ದೇಶದ ಆಡಳಿತದ ಚುಕ್ಕಾಣಿ ಹಿಡಿಯಲು ಈ ಕಾಯ್ದೆಯು ಮಹಿಳೆಯರಿಗೆ ಅವಕಾಶ ಕೊಡಲಿದೆ ಎಂದರು.

<><><><>

ಗ್ರಾಮ ಪಂಚಾಯಿತಿ ನೌಕರರಿಗೆ ಕನಿಷ್ಠ ವೇತನ ಹೆಚ್ಚಳ ಸೇರಿದಂತೆ ವಿವಿಧ ಬೇಡಿಕೆಗಳ ಈಡೇರಿಕೆಗಾಗಿ ಒತ್ತಾಯಿಸಿ ಗ್ರಾಮ ಪಂಚಾಯಿತಿ ನೌಕರರು ಕೊಲಾರ ಜಿಲ್ಲಾ ಪಂಚಾಯಿತಿ ಕಚೇರಿ ಮುಂಭಾಗದಲ್ಲಿ ಗುರುವಾರ ಪ್ರತಿಭಟನೆ ನಡೆಸಿ ಜಿಲ್ಲಾ ಪಂಚಾಯತಿ ಉಪ ಕಾರ್ಯದರ್ಶಿ ರಮೇಶ್ ಅವರಿಗೆ ಮನವಿ ಸಲ್ಲಿಸಿದರು. ಈ ಸಂದರ್ಭದಲ್ಲಿ ಸಂಘದ ಗೌರವ ಅಧ್ಯಕ್ಷ ಗಾಂಧಿನಗರ ನಾರಾಯಣಸ್ವಾಮಿ ಮಾತನಾಡಿ ಗ್ರಾಮ ಪಂಚಾಯಿತಿ ನೌಕರರಿಗೆ ೩೬ ಸಾವಿರ ಕನಿಷ್ಠ ವೇತನ, ಪಿಂಚಣಿ ಕನಿಷ್ಠ ೬ ಸಾವಿರ ರೂಪಾಯಿಗೆ ನಿಗದಿಪಡಿಸುವುದು, ಎಲ್ಲ ಗ್ರಾಮ ಪಂಚಾಯಿತಿಗಳಿಗೆ ದ್ವಿತೀಯ ದರ್ಜೆ ಗುಮಾಸ್ತರ ನೇಮಕ, ಹಳೆ ಪಿಂಚಣಿ ಯೋಜನೆ ಜಾರಿ, ಗ್ರ್ಯಾಚ್ಯುಟಿ ಪರಿಹಾರ ೯೦ ದಿನಕ್ಕೆ ಹೆಚ್ಚಿಸುವುದು ಸೇರಿದಂತೆ ಇನ್ನಿತರ ಬೇಡಿಕೆಗಳನ್ನು ಈಡೇರಿಸುವಂತೆ ಒತ್ತಾಯಿಸಿದರು.

<><><><>

ದಕ್ಷಿಣ ಕನ್ನಡ, ಉಡುಪಿ, ಚಿಕ್ಕಮಗಳೂರು, ಶಿವಮೊಗ್ಗ ಜಿಲ್ಲೆ ಒಳಗೊಂಡ ಮೆಸ್ಕಾಂ ವ್ಯಾಪ್ತಿಯಲ್ಲಿ ಪ್ರಸ್ತುತ ೪೬೫ ಮಂದಿ ಲೈನ್‌ಮ್ಯಾನ್‌ಗಳ ನೇಮಕಾತಿ ಮಾಡಿಕೊಳ್ಳಲಾಗುತ್ತಿದೆ. ಮೇ ಅಂತ್ಯದೊಳಗೆ ಹೊಸ ಲೈನ್‌ಮ್ಯಾನ್‌ಗಳು ಕರ್ತವ್ಯಕ್ಕೆ ಹಾಜರಾಗಲಿದ್ದಾರೆ ಎಂದು ಮೆಸ್ಕಾಂ ಅಧ್ಯಕ್ಷ ಹರೀಶ್ ಕುಮಾರ್ ತಿಳಿಸಿದ್ದಾರೆ. ಮೆಸ್ಕಾಂ ಕಚೇರಿಯಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಮೆಸ್ಕಾಂನಲ್ಲಿ ಒಂಬತ್ತು ಸಾವಿರದ ೨೪೮ ಮಂಜೂರು ಆಗಿರುವ ಲೈನ್‌ಮೆನ್‌ಗಳ ಹುದ್ದೆ ಇದ್ದು, ಪ್ರಸ್ತುತ ಸಾವಿರದ ೨೮೩ ಮಂದಿ ಕಾರ್ಯ ನಿರ್ವಹಿಸುತ್ತಿದ್ದಾರೆ. ಇನ್ನುಳಿದ ಹುದ್ದೆಗಳು ಖಾಲಿ ಇವೆ. ೪೦೦ ಮಂದಿ ಈಗಾಗಲೇ ವರ್ಗಾವಣೆ ಗೊಂಡಿದ್ದು ಹೊಸಬರು ಸೇರ್ಪಡೆಯಾದಾಗ ವರ್ಗಾವಣೆಗೊಂಡವರನ್ನು ಬಿಡುಗಡೆ ಗೊಳಿಸಲಾಗುತ್ತದೆ. ಹಾಗಾಗಿ ಕೊರತೆ ಮುಂದುವರಿಯಲಿದೆ ಎಂದರು. ಮಂಗಳೂರು, ಉಡುಪಿ ಸಹಿತ ಮೆಸ್ಕಾಂ ವ್ಯಾಪ್ತಿಯ ಜಿಲ್ಲೆಗಳಿಂದ ಲೈನ್‌ಮ್ಯಾನ್‌ಗಳಾಗಿ ನೇಮಕಗೊಳ್ಳುತ್ತಿರುವವರ ಸಂಖ್ಯೆ ತುಂಬಾ ಕಡಿಮೆಯಾಗಿದೆ. ಹೊರ ಜಿಲ್ಲೆಗಳಿಂದ ಹೆಚ್ಚಿನ ಸಂಖ್ಯೆಯಲ್ಲಿ ನೇಮಕಗೊಳ್ಳುತ್ತಿದ್ದಾರೆ. ಅವರು ವರ್ಗಾವಣೆಯಾಗುತ್ತಿರುವುದರಿಂದ ಕೊರತೆ ಉಂಟಾಗುತ್ತಿದೆ ಎಂದು ಅವರು  ಹೇಳಿದರು.

<><> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <><>